# ವಿಧಾನ ಪರಿಷತ್

**(ನಿಯಮ-330)**

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. ಮಾನ್ಯ ವಿಧಾನ ಪರಿಷತ್ ಸದಸ್ಯರು ಇವರು ನಿಯಮ 330ರಡಿ ದಕ್ಷಿಣ ಕನ್ನಡ ಜಿಲ್ಲೆಯ, ಬೆಳ್ತಂಗಡಿ ತಾಲ್ಲೂಕಿನ ಸುಮಾರು 10ಕ್ಕೂ ಹೆಚ್ಚು ಗ್ರಾಮಗಳಿಗೆ ಕೇಂದ್ರ ಸ್ಥಾನದಲ್ಲಿರುವ ನಾರಾವಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹೆರಿಗೆ ಸೌಲಭ್ಯ ವ್ಯವಸ್ಥೆ ಹಾಗೂ ಪೂರ್ಣಕಾಲಿಕ ಆರೋಗ್ಯಾಧಿಕಾರಿಗಳಿಲ್ಲದೆ ಮಹಿಳೆಯರಿಗೆ ಹಾಗೂ ಬಡಜನರಿಗೆ ಸಾಕಷ್ಟು ತೊಂದರೆಯಾಗುತ್ತಿದೆ. ಮಹಿಳೆಯರು ಹೆರಿಗೆ ಸೌಲಭ್ಯ ವ್ಯವಸ್ಥೆ ಹೊಂದಲು ಹಾಗೂ ಬಡಜನರು ಚಿಕಿತ್ಸೆ ಹಾಗೂ ಇತರೇ ವೈಧ್ಯಕೀಯ ಸೌಲಭ್ಯ ಪಡೆಯಲು ದೂರದ ಆಸ್ಪತ್ರೆಗಳಿಗೆ ತೆರಳಬೇಕಾದ ಅನಿವಾರ್ಯತೆಗೆ ಸಿಲುಕಿರುವ ಗಂಭೀರ ಸಮಸ್ಯೆ ಕುರಿತು:-**

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಉತ್ತರ:-**

ನಾರಾವಿ ಪ್ರಾಥಮಿಕ ಆರೋಗ್ಯ ಕೇಂದ್ರವು ದಕ್ಷಿಣ ಕನ್ನಡ ಜಿಲ್ಲೆಯ, ಬೆಳ್ತಂಗಡಿ ತಾಲ್ಲೂಕಿನ ವ್ಯಾಪ್ತಿಯಲ್ಲಿರುತ್ತದೆ.

ನಾರಾವಿ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಬೆಳ್ತಂಗಡಿ ತಾಲ್ಲೂಕು ಹಾಗೂ ಕಾರ್ಕಳ ತಾಲ್ಲೂಕಿಗೆ 24 ಕಿ.ಮೀ ದೂರದಲ್ಲಿದೆ.

ನಾರಾವಿ ಪ್ರಾಥಮಿಕ ಆರೋಗ್ಯ ಕೇಂದ್ರ ಅಡಿಯಲ್ಲಿ 4 ಆರೋಗ್ಯ ಕ್ಷೇಮ ಕೇಂದ್ರಗಳು ಸ್ಥಾಪನೆಗೊಂಡಿರುತ್ತವೆ ಹಾಗೂ ಸಮುದಾಯ ಆರೋಗ್ಯ ಕೇಂದ್ರ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ. ಈ ಆರೋಗ್ಯ ಕ್ಷೇಮ ಕೇಂದ್ರಗಳಲ್ಲಿಯೂ ಪ್ರಸವ ಪೂರ್ವ ಆರೈಕೆ ಹಾಗೂ ಗರ್ಭಿಣಿ ತಪಾಸಣೆಯನ್ನು ಮಾಡಲಾಗುತ್ತಿದೆ.

ನಾರಾವಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಹಜ ಹೆರಿಗೆಗಳನ್ನು ಮಾಡುವ ಸೌಲಭ್ಯವಿರುತ್ತದೆ. 2019-20ನೇ ಸಾಲಿನಲ್ಲಿ 4 ಹೆರಿಗೆಗಳು, 2020-21ನೇ ಸಾಲಿನಲ್ಲಿ 01 ಹೆರಿಗೆ ಹಾಗೂ 2021-22ನೇ ಸಾಲಿನಿಂದ ಇದೂವರೆಗೂ ಯಾವುದೇ ಹೆರಿಗೆ ಸಂಭವಿಸಿರುವುದಿಲ್ಲ.

ಪ್ರಸ್ತುತ ಪೂರ್ಣಕಾಲಿಕ ಆರೋಗ್ಯ ಅಧಿಕಾರಿಗಳು ಇರುವುದಿಲ್ಲ. ಆದರೆ ವಾರಕ್ಕೆ 2 ದಿನಗಳಲ್ಲಿ ನೆಲ್ಲಿಕಾರ್ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಓರ್ವ ವೈದ್ಯಾಧಿಕಾರಿಯನ್ನು ನಿಯೋಜಿಸಲಾಗಿದೆ.

ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪ್ರಸವ ಪೂರ್ವ ಆರೈಕೆ ನೀಡಲಾಗುತ್ತಿದೆ. ಹೆರಿಗೆ ಸೇವೆಗಳಿಗಾಗಿ ಗರ್ಭಿಣಿಯರು ಕಾರ್ಕಳ ಮತ್ತು ಲೇಡಿ ಗೋಷನ್ ಆಸ್ಪತ್ರೆ, ಮಂಗಳೂರುಗಳನ್ನು ಅವಲಂಬಿಸಿರುತ್ತಾರೆ.

ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪೂರ್ಣಕಾಲಿಕ ವೈದ್ಯಾಧಿಕಾರಿಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

**ಕಡತ ಸಂಖ್ಯೆ: ಆಕುಕ/ನಿಯಮ-330/2023**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**

Scanned with OKEN Scanner